KARNATAKA STATE AKKAMAHADEVI WOMEN UNIVERSITY, VIJAYAPURA

NEP-2020 AWARENESS PROGRAM

BHIMAPPA SOMAPPA NAVI

Digitally signed by BHIMAPPA SOMAPPA NAVI
DN: c=IN, o=KARNATAKA STATE AKKAMAHADEVI WOMENS UNIVERSITY VIJAYAPURA, ou=NA, 2.5.4.20=db7789db39afe1f3d852b09ea3497499328f50a9eb82c5e3eb9b8da79cde486e, postalCode=586108, st=KARNATAKA, serialNumber=a2019af0af54b531e19e9c7b6fbd664dec1569beb802de3505e28213b85e6333, cn=BHIMAPPA SOMAPPA NAVI
Date: 2023.08.10 11:34:19 +05'30'

ಉದಯಕಾಲ

ರಾಷ್ಟ್ರೀಯ ಶಿಕ್ಷಣ ನೀತಿ ಕುರಿತ ಜಾಗೃತಿ ಕಾರ್ಯಕ್ರಮ

ಉದಯಕಾಲ ನ್ಯೂಸ್

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಿದ್ದ ಜನಸ್ಪಂದನ ರಾಷ್ಟ್ರೀಯ ಶಿಕ್ಷಣ ನೀತಿ-2020 ಕುರಿತು ಜಾಗೃತಿ ಕಾರ್ಯಕ್ರಮದ ಅಂಗವಾಗಿ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಸಂವಾದದಲ್ಲಿ ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರವೇಶಾತಿ, ಭಾಷೆಯ ಕೊರತೆ, ಅಧ್ಯಯನಕ್ಕೆ ಬೇಕಾದ ಮೂಲಗಳು, ಭಾಷಾ ಸಾಮರ್ಥ್ಯ, ವಿದ್ಯಾರ್ಥಿಗಳಿಗೆ ನೀಡುವ ಕೌಶಲ್ಯಗಳ ಬಗ್ಗೆ ಈ ಸಂವಾದದಲ್ಲಿ ಮಾಹಿತಿ ನೀಡಲಾಯಿತು.

ಮಹಿಳಾ ವಿವಿಯ ಕುಲಪತಿ ಪ್ರೊ.ಸಿ.ಕೆ. ಕುಳಮಾಲ, ಕುಲಸಚಿವೆ ಪ್ರೊ.ಆರ್.ಸುನಂದಮ್ಮ, ಕರ್ನಾಟಕ ರಾಜ್ಯ ಮಹಾವಿದ್ಯಾಲಯ ಶಿಕ್ಷಕ ಸಂಘ ಹಾಗೂ ಸೇವಾ ಭಾರತಿ ಸಂಸ್ಥೆಯ ಅಧ್ಯಕ್ಷ ಡಾ. ರಘು ಅಕಮಂಚಿ, ಎನ್‌ಸಿಸಿ ಬಟ್ಟಾಲಿಯನ್ ಅಧ್ಯಕ್ಷ ಪ್ರೊ.ಎ.ಜಿ.ತಡಸದ ಪ್ರಶ್ನೆಗಳಿಗೆ ಉತ್ತರಿಸಿದರು.

ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಹೇಗೆ ಸರಿಯಾದ ಕ್ರಮದಲ್ಲಿ ಜಾರಿಗೊಳಿಸಬೇಕು ಎಂಬುದರ ಬಗ್ಗೆ ತಿಳಿಸಿದರು. ಜೊತೆಗೆ ಈ ನೀತಿಯನ್ನು ಅಳವಡಿಸಿಕೊಳ್ಳುವಲ್ಲಿ ಅನೇಕ ಸವಾಲುಗಳು ಎದುರಾಗುತ್ತವೆ. ಈ ಸವಾಲುಗಳನ್ನು ಯಾವ ರೀತಿ ಎದುರಿಸಬೇಕು.

ಆ ಎಲ್ಲ ಸವಾಲುಗಳನ್ನು ದಾಟಿ ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣವನ್ನು ನೀಡಬೇಕು ಎಂಬುದರ ಕುರಿತು ಚರ್ಚೆಗಳಾಯಿತು.

ಗ್ರಹಿಕೆ, ಕೌಶಲ್ಯ ಬೆಳವಣಿಗೆ, ಸಾಮರ್ಥ್ಯ ವೃದ್ಧಿ, ಮೌಲ್ಯಯುತ ಶಿಕ್ಷಣ ಹೀಗೆ ಅನೇಕ ವಿಷಯಗಳು ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಸಹಾಯ ಮಾಡುತ್ತವೆ. ಕೌಶಲ್ಯಾಧಾರಿತ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿರುವ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಮೂಲ ಉದ್ದೇಶ ಶೈಕ್ಷಣಿಕ ಕ್ಷೇತ್ರದಲ್ಲಿರುವ ಅಸಮಾನತೆಗಳು ಒದಗಿಸಲಿಕ್ಕಾಗಿದೆ ಎಂದು ತಿಳಿಸಿದರು.